ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಹನ್ನೆರಡನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ 9ನೇ ಮಾರ್ಚ್, 2022

(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹನ್ನೆರಡನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹನ್ನೆರಡನೇ ಪಟ್ಟಿ

2. ವರದಿಯನ್ನೊಪ್ಪಿಸುವುದು

ಶ್ರೀ ಆನಂದ ಅಲಿಯಾಸ್ ವಿಶ್ವನಾಥ್ ಚಂದ್ರಶೇಖರ ಮಾಮನಿ (ಮಾನ್ಯ ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಅರ್ಜಿಗಳ ಸಮಿತಿ) ಅವರು ಕರ್ನಾಟಕ ವಿಧಾನಸಭೆಯ ಅರ್ಜಿಗಳ ಸಮಿತಿಯ 2019-20 ಮತ್ತು 2020-21ನೇ ಸಾಲಿನ ಎರಡನೇ ವರದಿಯನ್ನೊಪ್ಪಿಸುವುದು.

3. ಚುನಾವಣಾ ಪ್ರಸ್ತಾವ

ಶ್ರೀ ಜೆ.ಸಿ. ಮಾಧುಸ್ವಾಮಿ (ಮಾನ್ಯ ಸಣ್ಣ ನೀರಾವರಿ ಹಾಗೂ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವರು) ಅವರು:-

1965ರ ಕರ್ನಾಟಕ ಸಾರ್ವಜನಿಕ ಗ್ರಂಥಾಲಯಗಳ ಅಧಿನಿಯಮ ಕಲಂ 3(2)(ಬಿ) ಮೇರೆಗೆ ವರ್ಗಾಯಿಸಬಹುದಾದ ಒಂಟಿ ಮತದ ಮೂಲಕ ದಾಮಾಷಾ ಪ್ರಾತಿನಿಧ್ಯದ ತತ್ವದ ಆಧಾರದ ಮೇಲೆ ಈ ಸಭೆಯು **ರಾಜ್ಯ ಗ್ರಂಥಾಲಯ ಪ್ರಾಧಿಕಾರಕ್ಕೆ ನಾಲ್ಕು ಸದಸ್ಯರುಗಳನ್ನು ಚುನಾಯಿಸಬೇಕೆಂದು** ಸೂಚಿಸುವುದು.

4. ವಿತ್ತೀಯ ಕಾರ್ಯಕಲಾಪ

2022-23ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಸಾಮಾನ್ಯ ಚರ್ಚೆ.

5. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಗೂಳಿಹಟ್ಟಿ ಡಿ. ಶೇಖರ್ ಅವರು** – ಚಿತ್ರದುರ್ಗ ಜಿಲ್ಲೆ ಹೊಸದುರ್ಗ ತಾಲ್ಲೂಕಿನ ಕಸಬಾ ಹೋಬಳಿ ಗೊರವಿನಕಲ್ಲು ಗ್ರಾಮದಲ್ಲಿ ಸರ್ಕಾರಿ ಜಾಗವನ್ನು ಅನಧಿಕೃತವಾಗಿ ಒತ್ತುವರಿ ಮಾಡಿಕೊಂಡು ಅಕ್ರಮ ದಾಖಲೆಗಳನ್ನು ಸೃಷ್ಟಿಸಿ ಕೊಟ್ಯಾಂತರ ರೂಪಾಯಿಗಳಿಗೆ ಮಾರಾಟ ಮಾಡುತ್ತಿರುವ ಒತ್ತುವರಿದಾರರನ್ನು ತೆರವುಗೊಳಿಸುವ ಬಗ್ಗೆ ಹಾಗೂ ಅಕ್ರಮ ಕಟ್ಟಡಗಳನ್ನು ಮತ್ತು ಅಂಗಡಿ ಮಳಿಗೆಗಳನ್ನು ಕಟ್ಟಲು ಸಹಾಯ ಮಾಡಿರುವ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

..2/

2) **ಶ್ರೀ ದಿನಕರ ಕೇಶವ ಶೆಟ್ಟಿ ಅವರು** – ಕುಮಟಾ ತಾಲ್ಲೂಕಿನ ಅಘನಾಶಿನಿ ನದಿಯಲ್ಲಿ ನಡೆಯುತ್ತಿರುವ ಚಿಪ್ಪಿ ಗಣಿಗಾರಿಕೆಯಿಂದಾಗಿ ನದಿಯಲ್ಲಿನ ಜೀವ ಸಂಕುಲ ನಾಶವಾಗಿ ಮೀನುಗಾರರು ಜೀವನ ನಿರ್ವಹಿಸುವುದು ದುಸ್ತರವಾಗಿರುವುದರಿಂದ ಚಿಪ್ಪಿ ಗಣಿಗಾರಿಕೆ ನಿಷೇಧ ಮಾಡುವ ಬಗ್ಗೆ ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಗಮನ ಸೆಳೆಯುವುದು.

3) **ಶ್ರೀ ಎ. ಮಂಜುನಾಥ್ ಅವರು** – ರಾಮನಗರ ಜಿಲ್ಲೆಯ ರಾಮನಗರ ಮತ್ತು ಕನಕಪುರ ತಾಲ್ಲೂಕಿನಲ್ಲಿ ಅಂತರ್ ಜಲ ಮಟ್ಟವು ಕುಸಿದಿರುವುದರಿಂದ, ವೃಷಭಾವತಿ ನದಿಯ ತ್ಯಾಜ್ಯ ನೀರು ಶುದ್ಧಿಕರಣ ಘಟಕದಿಂದ ರಾಮನಗರ ಮತ್ತು ಕನಕಪುರ ತಾಲ್ಲೂಕಿನ ಕೆರೆಗಳಿಗೆ ನೀರು ತುಂಬಿಸುವ ಯೋಜನೆಯ ಕಾಮಗಾರಿಯನ್ನು ಪ್ರಾರಂಭಿಸಲು ವಿಳಂಬವಾಗುತ್ತಿರುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

4) **ಶ್ರೀ ಡಿ.ಸಿ. ತಮ್ಮಣ್ಣ ಅವರು** – ರಾಜ್ಯದಲ್ಲಿ ಸಕ್ಕರೆ ಕಾರ್ಖಾನೆಗಳಿಂದ ವಸೂಲು ಮಾಡುತ್ತಿದ್ದ ರಸ್ತೆ ಕರವನ್ನು ಇಳಿಸಿರುವುದರಿಂದ ರೈತರಿಗಾಗಿರುವ ಅನ್ಯಾಯದ ಬಗ್ಗೆ ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಸಕ್ಕರೆ ಸಚಿವರ ಗಮನ ಸೆಳೆಯುವುದು.

5) **ಶ್ರೀ ವೀರಭದ್ರಯ್ಯ (ವೀರಣ್ಣ) ಚರಂತಿಮಠ ಅವರು** – ಬಾಗಲಕೋಟೆ ಜಿಲ್ಲೆ, ಹುನಗುಂದ ಮತ್ತು ಇಳಕಲ್ ಭಾಗದ ಖರೀದಿ ಕೇಂದ್ರಗಳಲ್ಲಿ ರೈತರಿಂದ ಖರೀದಿಸಿದ ತೊಗರಿಯನ್ನು ಎಜಿ ನೆಕ್ಸ್ಟ್ ಏಜೆನ್ಸಿಯವರು ತಿರಸ್ಕರಿಸಿರುವುದರಿಂದ, ಸದರಿ ದಾಸ್ತಾನನ್ನು ಮುಕ್ತ ಮಾರುಕಟ್ಟೆಯಲ್ಲಿ ಮಾರಾಟ ಮಾಡುವ ಬಗ್ಗೆ ಅಥವಾ ರಾಜ್ಯದ ಬಿಸಿಯೂಟ ಯೋಜನೆಯಡಿ ಖರೀದಿಸಿ ಅಕ್ಷರ ದಾಸೋಹ ಯೋಜನೆಗೆ ಬಳಕೆ ಮಾಡುವ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

6) **ಶ್ರೀ ಸಿ.ಎನ್. ಬಾಲಕೃಷ್ಣ ಅವರು** – ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ವಿದ್ಯಾರ್ಥಿಗಳಿಗೆ, ಸಾರ್ವಜನಿಕರಿಗೆ ಹಾಗೂ ರೈತರುಗಳಿಗೆ ಅನುಕೂಲವಾಗುವಂತೆ ಚನ್ನರಾಯಪಟ್ಟಣ ಘಟಕದಿಂದ ಕೆ.ಎಸ್.ಆರ್.ಟಿ.ಸಿ. ಬಸ್ಸುಗಳನ್ನು ಸಮಯಕ್ಕೆ ಸರಿಯಾಗಿ ಸಂಚರಿಸುವಂತೆ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಸಾರಿಗೆ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

7) **ಶ್ರೀ ಹೆಚ್.ಡಿ. ರೇವಣ್ಣ ಅವರು** – ಹೊಳೆನರಸೀಪುರ ಮತಕ್ಷೇತ್ರದ ಮೊಸಳೆಹೊಸಳ್ಳಿ ಗ್ರಾಮದಲ್ಲಿ ಪ್ರಾರಂಭಗೊಂಡಿರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನ ವಿದ್ಯುತ್ ಮತ್ತು ವಿದ್ಯುನ್ಮಾನ ವಿಭಾಗಕ್ಕೆ ಬೋಧಕ/ಬೋಧಕೇತರ ಸಿಬ್ಬಂದಿಗಳನ್ನು ಭರ್ತಿ ಮಾಡುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

8) **ಶ್ರೀ ಅಭಯ ಪಾಟೀಲ ಅವರು** – ಬೆಳಗಾವಿ (ಉತ್ತರ) ನೋಂದಣಿ ಕಚೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ಸಿಬ್ಬಂದಿಗಳು ಸತ್ತವರ ಹಾಗೂ ಬೇರೆಯವರ ಹೆಸರುಗಳಲ್ಲಿ ಜಾಗ/ಜಮೀನುಗಳನ್ನು ನೋಂದಣಿ ಮಾಡಿ ಸರ್ಕಾರಕ್ಕೆ ಕೋಟ್ಯಾಂತರ ನಷ್ಟ ಮಾಡಿರುವುದರಿಂದ, ಅವರುಗಳ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

ಎಂ.ಕೆ.ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ಅಂತರ್ಜಾಲದ ಈ ವಿಳಾಸದಲ್ಲಿ ಪಡೆದುಕೊಳ್ಳಬಹುದು
http://kla.kar.nic.in/assembly/lob/lob.htm